ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1642(1955)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಸಣ್ಣ ಕೈಗಾರಿಕೆ ಇಲಾಖೆಯ ಅಧೀನದ ನಿಗಮದ/ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಬಗ್ಗೆ

(ಅ) ಸಣ್ಣ ಕೈಗಾರಿಕೆಗಳ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮ/ಮಂಡಳಿಗಳು ಎಷ್ಟು; ಸದರಿ ನಿಗಮ/ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ, ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?